ಕಾರ್ಮಿಕರ ಕಲ್ಯಾಣ

400(174); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರಪೇಟೆ)

1) ಬಂಗಾರಪೇಟೆ ಕ್ಷೇತ್ರದಲ್ಲಿ ಹೆಚ್ಚಾಗಿ ಕಾರ್ಮಿಕರು ನಿರುದ್ಯೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಈ ತಾಲ್ಲೂಕಿನಲ್ಲಿ ಕಾರ್ಮಿಕರ ಅಭಿವೃದ್ಧಿ ಮತ್ತು ನಿರುದ್ಯೋಗ ನಿವಾರಣೆಗಾಗಿ ಸರ್ಕಾರ ಕೈಗೊಂಡ ಕ್ರಮವೇನು;

3) 2011–12, 2012–13 ಮತ್ತು 2013–14 ಅವಧಿಯಲ್ಲಿ ಇಲಾಖೆಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು; ಈ ಅನುದಾನದಲ್ಲಿ ಕೈಗೊಂಡ ಯೋಜನೆಗಳ ಸಂಪೂರ್ಣ ವಿವರ ಒದಗಿಸುವುದು?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

1) ಈ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

2)

1. ರಾಜ್ಯ ಸರ್ಕಾರ ಕಾರ್ಮಿಕರ ಅಭಿವೃದ್ಧಿಗಾಗಿ ರೂಪಿಸಿರುವ ಎಲ್ಲಾ ಕಲ್ಯಾಣ ಯೋಜನೆಗಳು ರಾಜ್ಯದ ಎಲ್ಲಾ ಕಾರ್ಮಿಕರಿಗೆ ಅನ್ವಯವಾಗುತ್ತವೆ. ಪ್ರತ್ಯೇಕವಾಗಿ ತಾಲ್ಲೂಕುವಾರು ಯೋಜನೆಗಳನ್ನು ರೂಪಿಸಿರುವುದಿಲ್ಲ.
2. 74 ವಿವಿಧ ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕನಿಷ್ಟ ವೇತನ ನಿಗದಿಪಡಿಸಿದ್ದು, ಕಾಲಕಾಲಕ್ಕೆ ವೇತನವನ್ನು ಪರಿಷ್ಕರಣೆ ಮಾಡಲಾಗುತ್ತದೆ.
3. ಮಹಿಳಾ ಮತ್ತು ಪುರುಷ ಕಾರ್ಮಿಕರು ಒಂದು ರೀತಿಯ ಕೆಲಸ ನಿರ್ವಹಿಸಿದಲ್ಲಿ ಸಮಾನ ವೇತನವನ್ನು ಜಾರಿಗೆ ತರಲಾಗುತ್ತಿದೆ.
4. ಮಹಿಳಾ ಕಾರ್ಮಿಕರಿಗೋಸ್ಕರ ಹೆರಿಗೆ ಭತ್ಯೆ ಕಾಯ್ದೆ, 1961 ಅನ್ನು ಜಾರಿಗೆ ತರಲಾಗುತ್ತಿದೆ.
5. ಸಂಸ್ಥೆಯಲ್ಲಿನ ಕಾರ್ಮಿಕರ ಸಂಖ್ಯೆಗೆ ಅನುಗುಣವಾಗಿ ಉಪದಾನ ಪಾವತಿ ಕಾಯ್ದೆ, 1972, ಬೋನಸ್ ಪಾವತಿ ಕಾಯ್ದೆ, 1965 ಮತ್ತು

ಇಎಸ್‌ಐ ಕಾಯ್ದೆ, 1948, ಮತ್ತು ಪಿಎಫ್ ಕಾಯ್ದೆ, 1952ಗಳು ಅನ್ವಯವಾಗುತ್ತದೆ.

6. ಸಂಸ್ಥೆಗಳಲ್ಲಿ 50 ಮತ್ತು 50 ಕ್ಕಿಂತ ಹೆಚ್ಚು ಕಾರ್ಮಿಕರು ಇದ್ದಲ್ಲಿ ಔದ್ಯೋಗಿಕ ಉದ್ಯೋಗಗಳ (ಸ್ಥಾಯಿ ಆದೇಶಗಳು) ಕಾಯ್ದೆ, 1946 ಅನ್ವಯವಾಗುತ್ತದೆ. ಈ ಕಾಯ್ದೆಯಡಿಯಲ್ಲಿ ಕಾರ್ಮಿಕರ ಸೇವಾಷರತ್ತುಗಳನ್ನು ನಿಯಂತ್ರಿಸಲಾಗುತ್ತದೆ.
7. ಸಂಘಟಿತ ಕಾರ್ಮಿಕರ ಅಭಿವೃದ್ಧಿಗಾಗಿ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಕಲ್ಯಾಣ ಯೋಜನೆಗಳನ್ನು ರೂಪಿಸಲಾಗಿದೆ.
8. ಅಸಂಘಟಿತ ಕಾರ್ಮಿಕರ ಅಭಿವೃದ್ಧಿ ಮತ್ತು ಕಲ್ಯಾಣಕ್ಕಾಗಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ಸ್ಥಾಪಿಸಲಾಗಿದೆ. ಈ ಮಂಡಳಿಯ ಮೂಲಕ
   ಅ] ಎನ್‌ಪಿಎಸ್ – ಲೈಟ್ ಸ್ವಾವಲಂಬನ್ ಪಿಂಚಣಿ ಯೋಜನೆ.
   ಆ] ಖಾಸಗಿ ವಾಣಿಜ್ಯ ವಾಹನಗಳ ಚಾಲಕರ ವಿಮಾ ಯೋಜನೆ
   ಇ] ರಾಷ್ಟ್ರೀಯ ಸ್ವಾಸ್ಥ್ಯ ಬಿಮಾ ಯೋಜನೆಯನ್ನು ಜಾರಿಗೆ ತರಲಾಗಿದೆ.
9. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಅಭಿವೃದ್ಧಿಗಾಗಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ರಚಿಸಲಾಗಿರುತ್ತದೆ. ಸದರಿ ಮಂಡಳಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 12 ಕಲ್ಯಾಣ ಯೋಜನೆಗಳನ್ನು ರೂಪಿಸಲಾಗಿದೆ.
10. ಕಾರ್ಮಿಕರಿಗೆ ವಿವಿಧ ಕಾರ್ಮಿಕ ಕಾನೂನುಗಳ ತಿಳುವಳಿಕೆಯನ್ನು ಕರ್ನಾಟಕ ಅಧ್ಯಯನ ಸಂಸ್ಥೆ ಮೂಲಕ ನೀಡಲಾಗುತ್ತಿದೆ.

3) ಬಿಡುಗಡೆಯಾದ ಅನುದಾನ ಮತ್ತು ಕೈಗೊಂಡ ಯೋಜನೆಗಳ ವಿವರಗಳನ್ನು **ಅನುಬಂಧ–ಅ** ನಲ್ಲಿ ಒದಗಿಸಿದೆ.